ಫ್ಯಾಕ್ಸ್ : 0816-2255761
ದೂರವಾಣಿ : 2272280

ತುಮಕೂರು ನಗರಾಭಿವೃದ್ಧಿ ಪ್ರಾಧಿಕಾರ

ಬೆಳಗುಂಬ ರಸ್ತೆ, ತುಮಕೂರು – 572 103

ನಗರಾಭಿವೃದ್ಧಿ ಪ್ರಾಧಿಕಾರ ಕಛೇರಿ
ಬೆಳಗುಂಬ ರಸ್ತೆ, ತುಮಕೂರು.

ದಿನಾಂಕ : 06.01.2011

ಅಂತಿಮ ವಿನ್ಯಾಸ ಅನುಮೋದನೆ ಆದೇಶ

ವಿಷಯ : ತುಮಕೂರು ನಗರದ **ಬಸವಾಪಟ್ಟಣ** ಗ್ರಾಮದ ಸರ್ವೆ ನಂಬರ್ **41/5,** 42/2 ರಲ್ಲಿ **ಒಟ್ಟು 5 ಎಕರೆ 15 ಗುಂಟೆ** ಪ್ರದೇಶಕ್ಕೆ ವಾಸದ ಉಪಯೋಗಕ್ಕೆ ಅಂತಿಮ ವಿನ್ಯಾಸ ನಕ್ಷೆ ಅನುಮೋದನೆ ಕೋರಿರುವ ಬಗ್ಗೆ.

ಉಲ್ಲೇಖ :

1. ಶ್ರೀ ಗಂಗಹನುಮಯ್ಯ ಬಿನ್ ಕೆ.ಹೆಚ್.ಹನುಮೇಗೌಡ ಇವರ ಮನವಿ ಅರ್ಜಿ ದಿನಾಂಕ **24-09-2010**
2. ಪ್ರಾಧಿಕಾರಕ್ಕೆ ಪರಿಶೀಲನಾ ಶುಲ್ಕ, ಉತ್ತಮತೆ ಶುಲ್ಕ ಮತ್ತು ಸ್ಲಂಸೆಸ್ ಶುಲ್ಕ ಪಾವತಿಸಿದ ರಸೀದಿ ಸಂಖ್ಯೆ **18060** ರೂ.**1,15,190** (ಒಂದು ಲಕ್ಷದ ಹದಿನೈದು ಸಾವಿರದ ಒಂದು ನೂರ ತ್ತೊಂಭತ್ತು ರೂಪಾಯಿಗಳು ಮಾತ್ರ) ದಿನಾಂಕ **05-12-2008** ಮತ್ತು ಮೇಲ್ವಿಚಾರಣಾ ಶುಲ್ಕ ಪಾವತಿಸಿದ ರಸೀದಿ ಸಂಖ್ಯೆ **19216 ರೂ.2,70,240** (ಎರಡು ಲಕ್ಷದ ಎಪ್ಪತ್ತು ಸಾವಿರದ ಎರಡು ನೂರ ನಲವತ್ತು ರೂಪಾಯಿಗಳು ಮಾತ್ರ) ದಿನಾಂಕ **09-02-2010**
3. ದಿನಾಂಕ **04-10-2008** ರ ಪ್ರಾಧಿಕಾರದ ಸಭೆಯ ವಿಷಯ ಸಂಖ್ಯೆ **26** ರ ನಿರ್ಣಯ
4. ಈ ಕಛೇರಿಯ ಪ್ರಾಥಮಿಕ ಅನುಮೋದನೆ ಆದೇಶ ಸಂಖ್ಯೆ ಟಿಯುಡಿಎ / ಎಲ್‌ಎಒ / 53 / 2008-09 ದಿನಾಂಕ 04-04-2009
5. ಪ್ರಾಥಮಿಕ ಅನುಮೋದನೆ ವಿನ್ಯಾಸ ನಕ್ಷೆಯಂತೆ ಅಭಿವೃದ್ಧಿ ಕಾರ್ಯಗಳನ್ನು ಪೂರ್ಣಗೊಳಿಸಿರುವ ಬಗ್ಗೆ ತಾಂತ್ರಿಕ ವಿಭಾಗದ ದೃಢೀಕರಣ ದಿನಾಂಕ 20-09-2010
6. ದಿನಾಂಕ **01-10-2010** ರ ಪ್ರಾಧಿಕಾರದ ಸಭೆಯ ವಿಷಯ ಸಂಖ್ಯೆ **19** ರ ನಿರ್ಣಯ
7. ರಸ್ತೆಗಳ ಪ್ರದೇಶವನ್ನು ಆಯುಕ್ತರು, ನಗರಾಭಿವೃದ್ಧಿ ಪ್ರಾಧಿಕಾರಕ್ಕೆ ಹಸ್ತಾಂತರಿಸಿ ನೊಂದಾಯಿಸಿ ಕೊಟ್ಟಿರುವ ದಾನಪತ್ರದ ದಸ್ತಾವೇಜು ನಂ.**8309** ದಿನಾಂಕ **15-11-2010**

* * * * *

ಪ್ರಸ್ತಾವನೆ :-

ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖ (1) ರಲ್ಲಿನ ಅರ್ಜಿದಾರರ ಮನವಿಯಲ್ಲಿ ತುಮಕೂರು ನಗರದ **ಬಸವಾಪಟ್ಟಣ** ಗ್ರಾಮದ ಸರ್ವೆ ನಂಬರ್ **41/5,** 42/2 ರಲ್ಲಿ ಒಟ್ಟು **5 ಎಕರೆ 15 ಗುಂಟೆ** ಪ್ರದೇಶಕ್ಕೆ ವಸತಿ ವಿನ್ಯಾಸ ನಕ್ಷೆಯನ್ನು ಅಂತಿಮವಾಗಿ ಅನುಮೋದಿಸಲು ಕೋರಲಾಗಿದೆ.

ಉಲ್ಲೇಖ (2) ರಲ್ಲಿ ಅರ್ಜಿದಾರರು ಶುಲ್ಕ ಪಾವತಿಸಿರುತ್ತಾರೆ. ಉಲ್ಲೇಖ (3) ರ ನಿರ್ಣಯದಂತೆ ಉಲ್ಲೇಖ (4) ರಲ್ಲಿ ಪ್ರಸ್ತಾವಿತ ಪ್ರದೇಶಕ್ಕೆ ಪ್ರಾಧಿಕಾರದಿಂದ ಪ್ರಾಥಮಿಕ ಅನುಮೋದನೆ ವಿನ್ಯಾಸ ನಕ್ಷೆ ತಯಾರಿಸಿ ಮೂಲಭೂತ ಸೌಕರ್ಯಗಳನ್ನು ಅಭಿವೃದ್ಧಿಪಡಿಸಲು ಶೇಕಡ 60 ರಷ್ಟು ನಿವೇಶನಗಳನ್ನು ಮಾರಾಟಕ್ಕೆ ಬಿಡುಗಡೆ ಮಾಡಲಾಗಿತ್ತು. ಉಲ್ಲೇಖ (5) ರ ತಾಂತ್ರಿಕ ಶಾಖೆಯ ವರದಿಯಂತೆ ಬಡಾವಣೆಯಲ್ಲಿ ಡಾಂಬರೀಕರಣ, ಸಿವಿಲ್ ಅಭಿವೃದ್ಧಿ ಕೆಲಸಗಳು, ನೀರು ಸರಬರಾಜು ವ್ಯವಸ್ಥೆ, ಒಳಚರಂಡಿ ವ್ಯವಸ್ಥೆ, ವಿದ್ಯುತ್ ವ್ಯವಸ್ಥೆ ಮುಂತಾದ ಎಲ್ಲಾ ಮೂಲಭೂತ ಸೌಕರ್ಯಗಳನ್ನು ಅಭಿವೃದ್ಧಿ ಪಡಿಸಲಾಗಿರುತ್ತದೆ.

ಉಲ್ಲೇಖ (7) ರಲ್ಲಿ ರಸ್ತೆಗಳ ಪ್ರದೇಶವನ್ನು ದಾನಪತ್ರದ ಮೂಲಕ ಆಯುಕ್ತರು, ನಗರಾಭಿವೃದ್ಧಿ ಪ್ರಾಧಿಕಾರ, ತುಮಕೂರು ಇವರಿಗೆ ಹಸ್ತಾಂತರಿಸಲಾಗಿರುತ್ತದೆ. ಆದುದರಿಂದ ಈ ಕೆಳಕಂಡಂತೆ ಆದೇಶಿಸಿದೆ.

ಸಂಖ್ಯೆ ತುನಪ್ರಾ/ನಯೋ/ವಿನ್ಯಾಸ/53/2008-09/1810
ಅಂತಿಮ ವಿನ್ಯಾಸ ನಕ್ಷೆ ದೃಢೀಕರಣ

ದಿನಾಂಕ : 04-01-2011

ಆದೇಶ

ಮೇಲ್ಕಂಡ ಅಂಶಗಳ ಹಿನ್ನೆಲೆಯಲ್ಲಿ ದಿನಾಂಕ 31-03-2009 ರಂದು ಬಿಡುಗಡೆ ಮಾಡಲಾದ ಶೇಕಡ 60 ರಷ್ಟು ನಿವೇಶನಗಳ ಜೊತೆಗೆ ಉಳಿದ ಶೇಕಡ 40 ರಷ್ಟು ನಿವೇಶನಗಳನ್ನು ಈಗ ಬಿಡುಗಡೆ ಮಾಡಿದ್ದು, ಈ ಕೆಳಕಂಡ ಷರತ್ತಿಗೊಳಪಟ್ಟು ವಿನ್ಯಾಸವನ್ನು ಅಂತಿಮವಾಗಿ ಅನುಮೋದಿಸಲಾಗಿದೆ.

ನಿಬಂಧನೆಗಳು:-

1. ವಿನ್ಯಾಸದಲ್ಲಿನ ನಿವೇಶನಗಳನ್ನು ಅನುಮೋದಿಸಲಾದ ಉದ್ದೇಶಕ್ಕೆ ಉಪಯೋಗಿಸತಕ್ಕದ್ದು. ನಿವೇಶನಗಳನ್ನು ಉಪವಿಭಜಿಸುವುದು / ಒಟ್ಟು ಗೂಡಿಸುವುದನ್ನು, ಅಳತೆಗಳನ್ನು ಮಾರ್ಪಾಡು ಮಾಡುವುದನ್ನಾಗಲೀ ಪ್ರಾಧಿಕಾರದ ಪೂರ್ವಾನುಮತಿ ಇಲ್ಲದೇ ಮಾಡತಕ್ಕದ್ದಲ್ಲ.
2. ವಿನ್ಯಾಸದಲ್ಲಿ ವಸತಿಗಾಗಿ **11625.27** ಚ.ಮೀ. (ಶೇಕಡ **53.42**); ಪಾರ್ಕ್ ಮತ್ತು ಬಯಲು ಜಾಗ **2295.35** ಚ.ಮೀ. (ಶೇಕಡ **10.55**); ರಸ್ತೆಗಳಿಗೆ **7839.13** ಚ.ಮೀ. (ಶೇಕಡ **36.03**) ಪ್ರದೇಶ ನಿಗಧಿಪಡಿಸಿದೆ. ವಸತಿ ವಿಸ್ತೀರ್ಣದಲ್ಲಿ ಅನುಮೋದಿತ ನಕ್ಷೆಯಲ್ಲಿ ತೋರಿಸಿರುವಂತೆ ಅನಿಯಮಿತ ಅಳತೆಯ **37** ನಿವೇಶನಗಳಿರುತ್ತವೆ.
3. ನಿವೇಶನಗಳಲ್ಲಿ ಕಟ್ಟಡ ನಿರ್ಮಾಣಕ್ಕೆ ಮೊದಲು ಸ್ಥಳೀಯ ಸಂಸ್ಥೆಯಿಂದ ಅಗತ್ಯ ಕಟ್ಟಡ ಪರವಾನಗಿ / ಪ್ರಾರಂಭಿಕ ಪ್ರಮಾಣ ಪತ್ರ ಪಡೆದು ಅನುಮೋದಿತ ಕಟ್ಟಡ ನಕ್ಷೆಯಂತೆಯೇ ಕಟ್ಟಡ ನಿರ್ಮಿಸತಕ್ಕದ್ದು.
4. ಮೇಲ್ಕಂಡ ಯಾವುದೇ ನಿಬಂಧನೆಯನ್ನಾದರೂ ಪಾಲಿಸದೇ ಇದ್ದಲ್ಲಿ; ನೀಡಲಾದ ಮಾಹಿತಿ / ದಾಖಲಾತಿ ತಪ್ಪು ಎಂದು ಕಂಡು ಬಂದಲ್ಲಿ ವಿನ್ಯಾಸವನ್ನು ಯಾವುದೇ ತಿಳುವಳಿಕೆ ನೀಡದೇ ರದ್ದುಪಡಿಸುವ ಅಥವಾ ಇತರೇ ಯಾವುದೇ ನಿಬಂಧನೆ ವಿಧಿಸುವ ಅಧಿಕಾರ ಪ್ರಾಧಿಕಾರಕ್ಕೆ ಇರುತ್ತದೆ.
5. ವಿನ್ಯಾಸ ಪ್ರದೇಶದ ಗಡಿಗಳು, ನಿವೇಶನದ ಗಡಿಗಳಿಗೆ ಸಂಬಂಧಿಸಿದಂತೆ ಯಾವುದೇ ತಂಟೆ ತಕರಾರು ಉಂಟಾದಲ್ಲಿ ವಿನ್ಯಾಸ/ನಿವೇಶನ ಮಾಲೀಕರೇ ತಮ್ಮ ಸ್ವಂತ ಜವಾಬ್ದಾರಿಯಲ್ಲಿ ಬಗೆಹರಿಸಿಕೊಳ್ಳತಕ್ಕದ್ದು ಹಾಗೂ ಈ ಅನುಮತಿಯ ಸಿವಿಲ್ ವ್ಯಾಜ್ಯಗಳಿಗೆ ಹೊರತಾಗಿದೆ.


ಆಯುಕ್ತರು
ನಗರಾಭಿವೃದ್ಧಿ ಪ್ರಾಧಿಕಾರ,
ತುಮಕೂರು.


ಶ್ರೀ ಗಂಗಹನುಮಯ್ಯ
ಬಿನ್ ಕೆ.ಹೆಚ್.ಹನುಮೇಗೌಡ
ಕ್ಯಾತ್ಸಂದ್ರ,
ತುಮಕೂರು.

ಪ್ರತಿಯನ್ನು :-

1. ಆಯುಕ್ತರು, ಮಹಾನಗರ ಪಾಲಿಕೆ, ತುಮಕೂರು ಇವರಿಗೆ ವಿನ್ಯಾಸ ನಕ್ಷೆಯೊಂದಿಗೆ ರವಾನಿಸುತ್ತಾ ವಿನ್ಯಾಸದ ನಕ್ಷೆಯಂತೆ ನಿಯಮಾನುಸಾರ ನಿವೇಶನಗಳ ಖಾತಾ ಮಾಡಬಹುದು ಹಾಗೂ ಕಟ್ಟಡ ನಿರ್ಮಾಣಕ್ಕೆ ಅನುಮತಿಸಬಹುದೆಂದು ತಿಳಿಸಲಾಗಿದೆ.
2. ಉಪನೊಂದಣಾಧಿಕಾರಿಗಳು, ತುಮಕೂರು ತಾಲ್ಲೂಕು, ತುಮಕೂರು ರವರಿಗೆ ಮಾಹಿತಿಗಾಗಿ ಕಳುಹಿಸಿದೆ.
3. ಕಛೇರಿ ಪ್ರತಿ.

UT





KEY MAP
NOT TO SCALE

LAND USE ANALYSIS

LAND USE	AREA IN SMT	%
RESIDENTIAL	11625.27 (125088.00 SFT)	53.
PARK OPEN SPACES	2295.35 (24698.00 SFT)	10.5
ROADS	7839.13 (84349.00 SFT)	36.95
TOTAL	21759.75 SMT (234135.00 SFT)	100.00

N

SCALE ~ 1 : 6 MTR

GOVERNMENT OF KARNATAKA
URBAN DEVELOPMENT AUTHORITY
TUMKUR

04/01/2011
JOINT DIRECTOR AND
TOWN PLANNING MEMBER
T. U. D. A
TUMKUR

COMMISSIONER
T. U. D. A
TUMKUR

DRN. BY:-	CHD. BY:-	DRG. NO:- 372

TITLE

PROPOSED LAYOUT PLAN IN SY. NO. 42/2 & 41/5 OF BASAVAPATNA VILLAGE, TUMKUR KASABA

TOTAL AREA ~ 5AC-15G